# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : | 1192 |
| ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು: | ಶ್ರೀ ವೈ. ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸ ಬೇಕಾದ ದಿನಾಂಕ : | 15.12.2023 |
| ಉತ್ತರಿಸುವವರು: | ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು. |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳಲ್ಲಿ ಅಂಗವಿಕಲರ/ದಿವ್ಯಾಂಗ ಕಲ್ಯಾಣ ಅಧಿಕಾರಿಗಳ ಕಛೇರಿ ಇದೆಯೇ; ಇದ್ದಲ್ಲಿ, ಈ ಹುದ್ದೆಯು ಎಷ್ಟು ದಿನಗಳಿಂದ ಖಾಲಿ ಇದೆ; ಇದಕ್ಕೆ ಕಾರಣವೇನು; ಇವರುಗಳ ಜವಾಬ್ದಾರಿ ಮತ್ತು ಕಾರ್ಯಗಳೇನು; (ವಿವರ ನೀಡುವುದು) | ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳಲ್ಲಿ ಜಿಲ್ಲಾ ಅಂಗವಿಕಲರ ಕಲ್ಯಾಣ ಅಧಿಕಾರಿಗಳ ಕಛೇರಿ ಇದೆ.<br>ಬಳ್ಳಾರಿ ಜಿಲ್ಲೆಯಲ್ಲಿ ಹಿಂದಿನ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಯವರು ವರ್ಗಾವಣೆಯಿಂದಾಗಿ ಈ ಹುದ್ದೆ ದಿನಾಂಕ:10.07.2020ರಿಂದ ಖಾಲಿ ಇದ್ದು, ಪ್ರಸ್ತುತ ಸದರಿ ಹುದ್ದೆಯ ಪ್ರಭಾರವನ್ನು ಈ ಇಲಾಖೆಯ ಬಳ್ಳಾರಿ ಜಿಲ್ಲೆಯ ಸರ್ಕಾರಿ ಕಿವುಡು ಮಕ್ಕಳ ಶಾಲೆಯ ಅಧೀಕ್ಷಕರಿಗೆ ಹೆಚ್ಚುವರಿಯಾಗಿ ವಹಿಸಲಾಗಿದೆ.<br>ಈ ಇಲಾಖೆಯಲ್ಲಿ ನೇರ ನೇಮಕವಾದ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಸಂಖ್ಯೆ ರಾಜ್ಯದಲ್ಲಿ 10 ಮಾತ್ರ ಇದ್ದು, ಇನ್ನುಳಿದಂತೆ ಅಧಿಕಾರಿಗಳು ಇಲ್ಲದೇ ಇರುವುದರಿಂದ, ಪ್ರಸ್ತುತ ವಿಜಯನಗರ ಜಿಲ್ಲೆಯಲ್ಲಿ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಯ ಪ್ರಭಾರವನ್ನು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧೀಕ್ಷಕರು ದರ್ಜೆ-2 ಅಧಿಕಾರಿಗೆ ವಹಿಸಲಾಗಿದೆ.<br>ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕರ್ತವ್ಯ ಸೂಚಿಯನ್ನು ಅನುಬಂಧ-01ರಲ್ಲಿ ಒದಗಿಸಲಾಗಿದೆ. |
| ಆ | ಈ ಜಿಲ್ಲೆಗಳಲ್ಲಿರುವ ಅಂಗವಿಕಲರ ಮಾಹಿತಿಗಳು ಇಲಾಖೆಯಲ್ಲಿದೆಯೇ; ಸರ್ಕಾರದಿಂದ ಅಂಗವಿಕಲರಿಗೆ/ ದಿವ್ಯಾಂಗರಿಗೆ ಇರುವ/ನೀಡುವ ಯೋಜನೆಗಳೇನು; ಈ ಯೋಜನೆಗಳನ್ನು ಈ ಅಂಗವಿಕಲರಿಗೆ ತಲುಪಿಸಲು ಯಾವ ಮಾರ್ಗವನ್ನು ರೂಪಿಸಲಾಗಿದೆ; (ಮಾಹಿತಿ ನೀಡುವುದು) | ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳಲ್ಲಿರುವ ಅಂಗವಿಕಲರ ಮಾಹಿತಿಯನ್ನು ಅನುಬಂಧ-02ರಲ್ಲಿ ಒದಗಿಸಲಾಗಿದೆ.<br>ಈ ಇಲಾಖೆಯಿಂದ ವಿಕಲಚೇತನರಿಗೆ ನೀಡುತ್ತಿರುವ ಯೋಜನೆಗಳ ಪಟ್ಟಿಯನ್ನು ಅನುಬಂಧ-03ರಲ್ಲಿ ಒದಗಿಸಲಾಗಿದೆ.<br>ಈ ಯೋಜನೆಗಳನ್ನು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಕಛೇರಿಗಳ ಮೂಲಕ ಮತ್ತು ಗೌರವಧನದಡಿ ಕಾರ್ಯನಿರ್ವಹಿಸುತ್ತಿರುವ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರು (ಗ್ರಾಮ ಪಂಚಾಯತಿ ಮಟ್ಟದಲ್ಲಿ), ತಾಲ್ಲೂಕು ಪುನರ್ವಸತಿ ಕಾರ್ಯಕರ್ತರ (ತಾಲ್ಲೂಕು ಮಟ್ಟದಲ್ಲಿ ಮತ್ತು ವಿವಿದೋದ್ದೇಶ ಪುನರ್ವಸತಿ ಕಾರ್ಯಕರ್ತರ (ನಗರ ಪ್ರದೇಶದಲ್ಲಿ) ಮೂಲಕ ಇಲಾಖೆಯ ಯೋಜನೆಗಳನ್ನು ವಿಕಲಚೇತನರಿಗೆ ತಲುಪಿಸಲಾಗುತ್ತಿದೆ. |
| ಇ | ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳಲ್ಲಿರುವ ಅಂಗವಿಕಲರ ಪಟ್ಟಿಯನ್ನು ಹಾಗೂ ಅವರುಗಳಿಗೆ ಸರ್ಕಾರದಿಂದ ನೀಡಲಾಗಿರುವ ಸೌಲಭ್ಯಗಳ ವಿವರಗಳೊಂದಿಗೆ ಮಾಹಿತಿ ನೀಡುವುದು? | ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳಲ್ಲಿರುವ ವಿಕಲಚೇತನರಿಗೆ ಕಳೆದ 03 ವರ್ಷಗಳಲ್ಲಿ ಇಲಾಖೆಯಿಂದ ನೀಡಿರುವ ಸೌಲಭ್ಯಗಳ ವಿವರವನ್ನು ಅನುಬಂಧ-04ರಲ್ಲಿ ಒದಗಿಸಲಾಗಿದೆ |

**ಸಂಖ್ಯೆ: ಮಮಇ 226 ಪಿಹೆಚ್‌ಪಿ 2023**

(ಲಕ್ಷ್ಮೀ ಆರ್. ಹೆಬ್ಬಾಳಕರ್)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಇಲಾಖೆ ಸಚಿವರು.

## ಅನುಬಂಧ-01

### ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕರ್ತವ್ಯ ಹಾಗೂ ಜವಾಬ್ದಾರಿಗಳು

- ಎಲ್ಲಾ ಜಿಲ್ಲೆಗಳಲ್ಲಿ ಸಾಮಾನ್ಯ ಶಾಲೆಗಳು ಸೇರಿ ಆರೋಗ್ಯ ತಪಾಸಣಾ ಕಾರ್ಯಕ್ರಮವನ್ನು ನಿರ್ವಹಿಸುವುದು ಜೊತೆಗೆ ಎಲ್ಲಾ ರೀತಿಯ ಅಂಗವಿಕಲತೆಯನ್ನು ಪತ್ತೆಹಚ್ಚುವುದು ಅವಶ್ಯಕವಾಗಿರುವ ಮತ್ತು ಚಿಕಿತ್ಸಾ ಮಾರ್ಗದರ್ಶನ ಸಾಧನ ಸಲಕರಣೆಗಳ ಪೂರೈಕೆ ಇವುಗಳನ್ನು ನಿರ್ವಹಿಸುವುದು. ಇದಲ್ಲದೆ ಆರೋಗ್ಯ ಶಿಬಿರಗಳನ್ನು ಆರೋಗ್ಯ ಇಲಾಖೆ ಮತ್ತು ಸಂಬಂಧಿಸಿದ ಬೇರೆ ಇಲಾಖೆಗಳ ಸಹಯೋಗದೊಂದಿಗೆ ಏರ್ಪಡಿಸಿ ಅಂಗವಿಕಲತೆಯನ್ನು ಪತ್ತೆಹಚ್ಚುವುದು/ಸಾಧನ ಸಲಕರಣೆಗಳನ್ನು ಪೂರೈಸುವುದು.
- ಅಂಗವಿಕಲರ ಅಧಿನಿಯಮ 2016 ಅನುಷ್ಠಾನದ ಬಗ್ಗೆ ತಡರಹಿತ ವಾತಾವರಣವನ್ನು ನಿರ್ಮಾಣ ಮಾಡುವ ದಿಸೆಯಲ್ಲಿ ಜಿಲ್ಲಾಧಿಕಾರಿಗಳ ಮಾರ್ಗದರ್ಶನದಲ್ಲಿ ಸಭೆಯನ್ನು ನಡೆಸಿ ಪರಿಶೀಲಿಸುವುದು. ವರ್ಷದಲ್ಲಿ ಕಡೆಯ ಪಕ್ಷ ಎರಡು ಬಾರಿಯಾದರು ಜಿಲ್ಲಾಮಟ್ಟದ ಅಧಿಕಾರಿಗಳ ಸಭೆಯನ್ನು ಆಯೋಜಿಸಿ ಲೋಕೋಪಯೋಗಿ/ನಗರಸಭೆ/ ಪುರಸಭೆ/ಗ್ರಾಮಪಂಚಾಯತಿ ಸದಸ್ಯರನ್ನೊ ಒಳಗೊಂಡಂತೆ ತಡೆರಹಿತ ವಾತಾವರಣವನ್ನು ಏರ್ಪಡಿಸಲು ಎಲ್ಲಾ ಸಾರ್ವಜನಿಕ ಕಟ್ಟಡಗಳಲ್ಲಿ ಆಸ್ಪತ್ರೆಗಳು ಸೇರಿ ರ್‍ಯಾಂಪ್ ಅಳವಡಿಸಲು ಕ್ರಮ ತೆಗೆದುಕೊಳ್ಳವುದು.
- ವಿದ್ಯಾರ್ಥಿವೇತನದ ಬಗ್ಗೆ ವ್ಯಾಪಕವಾಗಿ ಪ್ರಚಾರ ನೀಡಿ ಅರ್ಜಿಗಳನ್ನು ಎಲ್ಲಾ ವಿದ್ಯಾರ್ಥಿಗಳಿಂದ ಸ್ವೀಕರಿಸಲು ಕಾಲಕಾಲಕ್ಕೆ ಪರಿಶೀಲಿಸಿ ಆಯವ್ಯಯದಲ್ಲಿ ಒದಗಿಸಿರುವ ಎಲ್ಲಾ ಹಣವನ್ನು ಅಂಗವಿಕಲ ವಿದ್ಯಾರ್ಥಿಗಳಿಗೆ ಒದಗಿಸುವುದು. ಅದೇ ರೀತಿ. ಪ್ರತಿಭಾ ಪುರಸ್ಕಾರ ವಿಷಯ ಹಂಚಿಕೆಯಲ್ಲೂ ಸಹ ಆಸಕ್ತಿ ವಹಿಸಿ ಕಾರ್ಯ ನಿರ್ವಹಿಸುವುದು.
- ಸ್ವಯಂ ಉದ್ಯೋಗ ಯೋಜನೆಯಡಿ ನಿರ್ದೇಶನಾಲಯದ ಅನುದಾನದ ಸಹಾಯದಿಂದ ಆಧಾರ ಯೋಜನೆಯ ಬಗ್ಗೆ, ಗ್ರಾಮೀಣ ಯುವಕ ಯುವತಿಯರಿಗೆ ರೂಡ್ ಸೆಟ್ ಸಂಸ್ಥೆಯಿಂದ ವೃತ್ತಿ ತರಬೇತಿ ಮತ್ತು ಟೆಲಿಫೋನ್ ಬೂತ್ ವಿತರಣೆ ಈ ಎಲ್ಲಾ ಕಾರ್ಯಕ್ರಮಗಳ ಬಗ್ಗೆ ವ್ಯಾಪಕವಾಗಿ ಪ್ರಚಾರ ಮಾಡಿ ಎಲ್ಲಾ ಅರ್ಹ ಅಂಗವಿಕಲ ವ್ಯಕ್ತಿಗಳು ಈ ಯೋಜನೆಯ ಸದುಪಯೋಗ ಮಾಡಿಕೊಳ್ಳುವಂತೆ ತಿಳಿಸುವುದು. ಮತ್ತು ಮೇಲ್ವಿಚಾರಣೆ ಮಾಡುವುದು. ಈ ಎಲ್ಲಾ ಯೋಜನೆ ಅಡಿಯಲ್ಲಿ ಪ್ರತ್ಯೇಕವಾಗಿ ಪುರುಷರು/ಮಹಿಳೆಯರು ಲಾಭ ಪಡೆದು ಸ್ವಯಂ ಉದ್ಯೋಗವನ್ನು ಅವಲಂಬಿಸಿರುವ ಬಗೆಗೆ ಕೂಲಂಕುಷವಾದ ತನಿಖೆ ಮಾಡಿ ವರದಿಯನ್ನು ಪ್ರತಿ ಮೂರು ತಿಂಗಳಿಗೊಮ್ಮೆ ನಿರ್ದೇಶನಾಲಯಕ್ಕೆ ಸಲ್ಲಿಸುವುದು. ಆಧಾರ ಯೋಜನೆಯಡಿ ನೀಡಿರುವ ಸಾಲದ ಹಣವನ್ನು ಮರುಪಾವತಿ ಮಾಡಿಸುವುದು.
- ಜಿಲ್ಲಾ ಮಟ್ಟದಲ್ಲಿ ಯಾವುದೇ ಇಲಾಖಾ/ನಿಗಮಗಳಲ್ಲಿ ನೇಮಕಾತಿ ಮಾಡಿದರೂ ಕಡ್ಡಾಯವಾಗಿ ಶೇಕಡಾ 5ರಷ್ಟು ಮೀಸಲಾತಿಯನ್ನು ಸಿ ಮತ್ತು ಡಿ ಹುದ್ದೆಯಲ್ಲಿ ಹಾಗು ಶೇಕಡಾ 4ರಷ್ಟು ಮೀಸಲಾತಿಯನ್ನು ಎ ಮತ್ತು ಬಿ ವೃಂದದ ಹುದ್ದೆಯಲ್ಲಿ ಜಾರಿಗೊಳಿಸಿರುವುದರ ಬಗ್ಗೆ ಎಲ್ಲಾ ಇಲಾಖೆಯಿಂದ ವರದಿಯನ್ನು ಸಂಗ್ರಹಿಸಿ ನಿರ್ದೇಶನಾಲಯಕ್ಕೆ ಸಲ್ಲಿಸುವುದು.
- ಅಂಗವಿಕಲರ ಯುಡಿಐಡಿ ಚೀಟಿ ವಿತರಣೆಯ ಬಗ್ಗೆ ಶಿಬಿರವನ್ನು ಏರ್ಪಡಿಸಿ ಪಡೆಯುವುದರ ಬಗ್ಗೆ ಮಾಹಿತಿ ಸಂಗ್ರಹಿಸಿ ಗುರುತಿನ ಚೀಟಿಗಳನ್ನು ವಿತರಿಸುವ ಬಗ್ಗೆ ಕ್ರಮ ವಹಿಸುವುದು.
- ಪ್ರತಿ ಮೂರು ತಿಂಗಳಿಗೊಮ್ಮೆ ಕೇಂದ್ರ ಹಾಗೂ ರಾಜ್ಯ ಸರ್ಕಾರದಿಂದ ಅನುದಾನ ಪಡೆಯುವ ಸಂಸ್ಥೆಗಳಿಗೆ /ಶಾಲೆಗಳಿಗೆ/ವೃದ್ಧಾಶ್ರಮ/ಮಹಿಳಾ ವಸತಿನಿಲಯಗಳಿಗೆ ಭೇಟಿ ನೀಡಿ ಅಲ್ಲಿರುವ ಲೆಕ್ಕಪತ್ರಗಳು ಸೌಲಭ್ಯಗಳ ಬಗ್ಗೆ ಪರಿಶೀಲಿಸಿ ಸಿಬ್ಬಂದಿ ನೇಮಕಾತಿಯೊಂದಿಗೆ ನಿಯಮಾನುಸಾರ ಕಾರ್ಯ ನಿರ್ವಹಣೆ ಬಗ್ಗೆ ನಿರ್ದೇಶನಾಲಯಕ್ಕೆ ವರದಿ ಸಲ್ಲಿಸುವುದು.
- ಅಂಗವಿಕಲರ ಸಮೀಕ್ಷೆ ಕಾರ್ಯಕ್ರಮಗಳನ್ನು ಸರಕಾರದ ಯೋಜನೆ ಯಡಿಯಲ್ಲಿ ಹಮ್ಮಿಕೊಳ್ಳಬೇಕಾಗಿರುವುದರಿಂದ ಅದರ ಬಗ್ಗೆ ಪೂರ್ವಭಾವಿಯಾಗಿ /ಪ್ರಾಥಮಿಕವಾಗಿ ಬೇಕಾಗಿರುವ ಸೌಲಭ್ಯದ ಮಾಹಿತಿಯನ್ನು ಸಂಗ್ರಹಿಸುವುದು.

- ಪ್ರತಿ ತಾಲ್ಲೂಕಿನಲ್ಲಿ ಸಾಧನ ಸಲಕರಣೆಗಳ ಶಿಬಿರಗಳನ್ನು ವ್ಯಾಪಕ ಪ್ರಚಾರದೊಂದಿಗೆ ಕೈಗೊಂಡು ಸಾಧನ ಸಲಕರಣೆಗಳನ್ನು ವಿತರಿಸಲು ಕ್ರಮ ತೆಗೆದುಕೊಳ್ಳುವುದು.
- ಜಿಲ್ಲಾ ಮಟ್ಟದಲ್ಲಿ ಎಲ್ಲಾ ಯೋಜನೆಗಳ ಸೌಲಭ್ಯ ಪಡೆದ ಎಲ್ಲಾ ಅಂಗವಿಕಲರ ಪೂರ್ಣ ಮಾಹಿತಿಯನ್ನು ಯೋಜನಾವಾರು /ವಿತರಣಾವಾರು/ಮಹಿಳೆ/ಪುರುಷರು ಎಸ್‌ಸಿ ಹಾಗು ಎಸ್‌ಟಿ ಹೀಗೆ ಸಂಗ್ರಹಿಸುವುದು ಮತ್ತು ಪ್ರತಿ ಮಾಹೆ ವರದಿಯನ್ನು ನಿರ್ದೇಶನಾಲಯಕ್ಕೆ ಸಲ್ಲಿಸುವುದು.
- ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆರವರ ಮಾರ್ಗದರ್ಶನದ ಮೇರೆಗೆ ಇಲಾಖಾ ನಿಯಮಾವಳಿಗಳ ಮೇರೆಗೆ ಅಂಗವಿಕಲರ ಕಲ್ಯಾಣಾಧಿಕಾರಿಗಳು ಯೋಜನೆಗಳನ್ನು ಅನುಷ್ಠಾನಗೊಳಿಸಲು ಜವಾಬ್ದಾರರಾಗಿರುತ್ತಾರೆ.
- ಕೇಂದ್ರ/ರಾಜ್ಯ ಪ್ರಶಸ್ತಿಗಳಿಗೆ ವ್ಯಕ್ತಿಗಳು ಮತ್ತು ಸಂಸ್ಥೆಗಳಿಗೆ ಸಂಬಂಧಿಸಿದಂತೆ ನಿಗದಿಪಡಿಸಿದ ಅವಧಿಯೊಳಗೆ ಪ್ರಚಾರ ನೀಡಿ ವ್ಯಕ್ತಿ ಮತ್ತು ಸಂಸ್ಥೆಗಳ ಪೂರ್ಣವಾದ ಸೇವಾ ನಮೂನೆಗಳನ್ನು ವಿವರಗಳೊಂದಿಗೆ ಸ್ಪಷ್ಟ ಅಭಿಪ್ರಾಯದೊಂದಿಗೆ ಪ್ರಸ್ತಾವನೆಗಳನ್ನು ಸಲ್ಲಿಸುವುದು.
- ಪ್ರತಿ ವರ್ಷ ಅಕ್ಟೋಬರ್ 01 ರಂದು ವಿಶ್ವ ಹಿರಿಯ ನಾಗರಿಕರ ದಿನಾಚರಣೆಯನ್ನು ಹಾಗೂ ಡಿಸೆಂಬರ್ 3 ರಂದು ವಿಶ್ವ ಅಂಗವಿಕಲರ ದಿನಾಚರಣೆಯನ್ನು ನಡೆಸಬೇಕಾಗಿರುವುದರಿಂದ ಎಲ್ಲಾ ಸ್ವಯಂ ಸೇವಾ ಸಂಸ್ಥೆಗಳ ಸಹಯೋಗದಲ್ಲಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳುವುದು ಸಾಂಸ್ಕೃತಿಕ ಹಾಗು ಕ್ರೀಡಾ ಚಟುವಟಿಕೆಗಳನ್ನು ಏರ್ಪಡಿಸುವುದು.
- ಅಂಗವಿಕಲರ ಕಲ್ಯಾಣ ಇಲಾಖೆಗೆ ಸಂಬಂಧಿಸಿದಂತೆ ಕಾಲೋಚಿತವಾದ ಸುತ್ತೋಲೆಗಳನ್ನು ಆದೇಶಗಳನ್ನು ಕಡತಗಳನ್ನು ನಿರ್ವಹಿಸುವುದು ಪಾಲಿಸುವುದು. ಎಲ್ಲಾ ಯೋಜನೆಗಳ ಪೂರ್ಣ ವಿವರಗಳನ್ನು ನಿರ್ದಿಷ್ಟ ನಮೂನೆಯಲ್ಲಿ ನಿರ್ವಹಿಸುವುದು. ಪ್ರತಿ ವರ್ಷ ಜನವರಿ 31 ರೊಳಗೆ ಜಿಲ್ಲೆಗೆ ನೀಡಿರುವ ಎಲ್ಲಾ ಆಯವ್ಯಯಗಳನ್ನು ಸಮರ್ಪಕವಾಗಿ ವಿನಿಯೋಗಿಸುವುದು.
- ಎಲ್ಲಾ ಯೋಜನೆಗಳಿಗೆ ಸಂಬಂದಿಸಿದಂತೆ ಹೆಚ್ಚಿನ ಆಯವ್ಯಯದ ಅವಶ್ಯಕತೆ ಇದ್ದಲ್ಲಿ ವಿವರವಾದ ಪ್ರಸ್ತಾವನೆಯನ್ನು ನಿರ್ದೇಶನಾಲಯಕ್ಕೆ ಸಲ್ಲಿಸುವುದು.
- ಎಲ್ಲಾ ಫಲಾನುಭವಿ ಆಧಾರಿತ ಯೋಜನೆಗಳಿಗೆ ಸಂಬಂಧಿಸಿದ ಪ್ರತ್ಯೇಕವಾದ ಕಡತವನ್ನು ನಿರ್ವಹಿಸುವುದು. ಒದಗಿಸಿರುವ ಸೌಲಭ್ಯಗಳ ಮಾಹಿತಿಯನ್ನು ನಮೂದಿಸುವುದು. ಸೌಲಭ್ಯವನ್ನು ಪಡೆದವರು ಸರಿಯಾಗಿ ಉಪಯೋಗ ಮಾಡಿಕೊಂಡಿರುವ ಬಗ್ಗೆ ಅನುಪಾಲನಾ ತಪಾಸಣೆಯನ್ನು ಮಾಡುವುದು.
- ಜಿಲ್ಲೆಯಲ್ಲಿರುವ ಅಂಧ ಹಾಗು ಕಿವುಡು ಮಕ್ಕಳ ಸರಕಾರಿ ಶಾಲೆಗಳು/ ಸಂಸ್ಥೆಗಳಿಗೆ ಭೇಟಿ ನೀಡಿ ಸಂಸ್ಥೆಯ ನಿರ್ವಹಣೆ ಮತ್ತು ಉಸ್ತುವಾರಿಯ ಬಗ್ಗೆ ಗಮನ ವಹಿಸಬೇಕು. ಶಾಲೆ ಹಾಗೂ ಸಂಸ್ಥೆಗಳ ವಿವರವಾದ ತನಿಖೆಯನ್ನು ಪ್ರತಿ ಆರು ತಿಂಗಳಿಗೊಮ್ಮೆ ತಪ್ಪದೇ ನಡೆಸಬೇಕು. ಹಾಗು ಆಗಿಂದಾಗ್ಗೆ ಭೇಟಿ ನೀಡಬೇಕು. ಸಂಸ್ಥೆಗಳಲ್ಲಿರುವ ಸಮಸ್ಯೆಗಳ ಬಗ್ಗೆ ಆಗಾಗ್ಗೆ ವಿಚಾರಿಸಿ ಸಂಸ್ಥೆಯ ಅಧೀಕ್ಷಕರುಗಳಿಗೆ ಸಮಸ್ಯೆಗಳ ಪರಿಹಾರದ ಬಗ್ಗೆ ಹಾಗೂ ಇನ್ನಿತರೇ ವಿಷಯಗಳ ಬಗ್ಗೆ ಮಾರ್ಗದರ್ಶನ ನೀಡವುದು.
- ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಪ್ರತಿ ತಿಂಗಳ 10ನೇ ತಾರೀಕಿನೊಳಗೆ ದಿನಚರಿಯನ್ನು ಪ್ರಧಾನ ಕಛೇರಿಗೆ ಸಲ್ಲಿಸತಕ್ಕದ್ದು.
- ಸಕಾಲ ಯೋಜನೆಯಡಿ ಅನುಷ್ಠಾನದ ಬಗ್ಗೆ ಕ್ರಮವಹಿಸುವುದು ಹಾಗೂ ವರದಿ ಸಲ್ಲಿಸುವುದು.
- ಸರಕಾರದ ಆದೇಶಾನುಸಾರ ಅನುದಾನಿತ ಸಂಸ್ಥೆಗಳ ವೇತನ ಬಟವಾಡೆ ಅಧಿಕಾರಿಯಾಗಿ ಕರ್ತವ್ಯ ನಿರ್ವಹಿಸುವುದರ ಜೊತೆಗೆ ಆಡಳಿತಾತ್ಮಕ ಕೆಲಸಗಳನ್ನು ನಿರ್ವಹಿಸುವುದು.
- ಇಲಾಖೆಗೆ ಸರಕಾರದಿಂದ ರೂಪಿಸಲಾಗುವ ಹೊಸ ಯೋಜನೆಗಳ ಅನುಷ್ಠಾನಕ್ಕೆ ಅಗತ್ಯ ಕ್ರಮವಹಿಸುವುದು.

# ಅನುಬಂಧ-02

## 2011ರ ಜನಗಣತಿಯಂತೆ ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಯಲ್ಲಿರುವ ವಿಕಲಚೇತನರ ಸಂಖ್ಯೆ

| ಕ್ರ.ಸಂ. | ತಾಲ್ಲೂಕುಗಳು | ದೃಷ್ಠಿದೋಷವುಳ್ಳವರು | ಶ್ರವಣದೋಷವುಳ್ಳವರು | ದೈಹಿಕ ವಿಕಲಚೇತನರು | ಬುದ್ಧಿ ಮಾಂದ್ಯರು | ಮಾನಸಿಕ ಅಸ್ವಸ್ಥರು | ಇತರೆ ವಿಕಲ ಚೇತನರು | ಬಹುವಿಧ ವಿಕಲ ಚೇತನರು | ಒಟ್ಟು |
|---|---|---|---|---|---|---|---|---|---|
| | | Those who are visually impaired | Those with hearing impairment | Physicall Disabilities | People with dementia | The mentally ill | Other handicapped people | Multiple disabilities | Total |
| *1* | *2* | *3* | *4* | *5* | *6* | *7* | *8* | *9* | *10* |
| | | | | ಬಳ್ಳಾರಿ ಜಿಲ್ಲೆ | | | | | |
| 1 | ಬಳ್ಳಾರಿ | 260 | 263 | 1787 | 415 | 36 | 39 | 94 | 2894 |
| 2 | ಕಂಪ್ಲಿ | 162 | 178 | 852 | 143 | 129 | 28 | 132 | 1624 |
| 3 | ಕುರುಗೋಡು | 83 | 127 | 807 | 170 | 24 | 3 | 29 | 1243 |
| 4 | ಸಿರುಗುಪ್ಪ | 61 | 53 | 2163 | 37 | 53 | 19 | 21 | 2407 |
| 5 | ಸಂಡೂರು | 153 | 251 | 1026 | 232 | 31 | 12 | 67 | 1772 |
| | ಒಟ್ಟು | 719 | 872 | 6635 | 997 | 273 | 101 | 343 | 9940 |
| | | | | ವಿಜಯನಗರ ಜಿಲ್ಲೆ | | | | | |
| 1 | ಹಡಗಲಿ | 591 | 709 | 1577 | 512 | 315 | 157 | 823 | 3943 |
| 2 | ಹಗರಿಬೊಮ್ಮನಹಳ್ಳಿ | 410 | 519 | 1252 | 180 | 118 | 56 | 96 | 2631 |
| 3 | ಹರಪನಹಳ್ಳಿ | 498 | 504 | 2913 | 490 | 147 | 66 | 76 | 4694 |
| 4 | ಹೊಸಪೇಟೆ | 210 | 238 | 1551 | 363 | 287 | 102 | 218 | 2969 |
| 5 | ಕೊಟ್ಟೂರು | 143 | 133 | 646 | 103 | 13 | 4 | 46 | 1088 |
| 6 | ಕೂಡ್ಲಿಗಿ | 477 | 408 | 1292 | 252 | 33 | 16 | 69 | 2547 |
| | **ಒಟ್ಟು** | 2329 | 2511 | 9231 | 1900 | 913 | 401 | 1328 | 17872 |

# ಅನುಬಂಧ-03

## ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ವತಿಯಿಂದ ವಿಕಲಚೇತನರಿಗೆ ಕೈಗೊಂಡಿರುವ ಯೋಜನೆಗಳು

**1.ಶ್ರವಣದೋಷವುಳ್ಳ ಮಕ್ಕಳಿಗಾಗಿ ಸರ್ಕಾರದ ವಸತಿಯುತ ಶಾಲೆಗಳು:**

ಶ್ರವಣದೋಷವುಳ್ಳ ಮಕ್ಕಳಿಗಾಗಿ ಮೈಸೂರು, ಕಲಬುರ್ಗಿ, ಬಳ್ಳಾರಿ, ಬೆಳಗಾವಿ ಜಿಲ್ಲೆಗಳಲ್ಲಿ 5 ಕಿವುಡು ಮಕ್ಕಳ ವಸತಿ ಶಾಲೆಗಳನ್ನು ಇಲಾಖಾವತಿಯಿಂದ ನಡೆಸಲಾಗುತ್ತಿದೆ.ಈ ಶಾಲೆಗಳಲ್ಲಿ ಮಕ್ಕಳಿಗೆ ಉಚಿತ ವಸತಿ, ಊಟ ಮತ್ತು ಶಿಕ್ಷಣವನ್ನು ನೀಡಲಾಗುತ್ತಿದೆ.ಈ ಪೈಕಿ ಶ್ರವಣದೋಷವುಳ್ಳ ಹೆಣ್ಣು ಮಕ್ಕಳಿಗಾಗಿ ಬೆಳಗಾವಿಯಲ್ಲಿ ಪ್ರತ್ಯೇಕ ವಸತಿ ಶಾಲೆ ಇರುತ್ತದೆ.

**2.ಅಂಧ ಮಕ್ಕಳಿಗಾಗಿ ಸರ್ಕಾರದ ವಸತಿಯುತ ಶಾಲೆಗಳು:**

ಅಂಧ ಮಕ್ಕಳಿಗಾಗಿ ಕಲಬುರ್ಗಿ, ಮೈಸೂರು, ದಾವಣಗೆರೆ ಹಾಗೂ ಹುಬ್ಬಳ್ಳಿಯಲ್ಲಿ 04 ವಿಶೇಷ ಶಾಲೆಗಳನ್ನು ನಡೆಸಲಾಗುತ್ತಿದೆ.ಈ ಶಾಲೆಗಳಲ್ಲಿ ದೃಷ್ಟಿದೋಷವುಳ್ಳ ಮಕ್ಕಳಿಗೆ ಉಚಿತ ಊಟ, ವಸತಿ ಮತ್ತು ಶಿಕ್ಷಣವನ್ನು ನೀಡಲಾಗುತ್ತಿದೆ.ಈ ಪೈಕಿ ದೃಷ್ಟಿದೋಷವುಳ್ಳ ಹೆಣ್ಣು ಮಕ್ಕಳಿಗಾಗಿ ದಾವಣಗೆರೆಯಲ್ಲಿ ಪ್ರತ್ಯೇಕ ವಸತಿ ಶಾಲೆ ಇರುತ್ತದೆ.

**3. 1982ರ ರಾಜ್ಯ ಅನುದಾನ ಸಂಹಿತೆಯಡಿ ನಡೆಯುತ್ತಿರುವ ವಿಶೇಷ ಶಾಲೆಗಳು:**

1982ರ ರಾಜ್ಯ ಅನುದಾನ ಸಂಹಿತೆಯಡಿ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಸ್ವಯಂ ಸೇವಾ ಸಂಸ್ಥೆಗಳ ಮೂಲಕ 33 ವಿಶೇಷ ಶಾಲೆ/ ತರಬೇತಿ ಕೇಂದ್ರಗಳನ್ನು ದೈಹಿಕ, ಅಂಧ, ಶ್ರವಣದೋಷ ಹಾಗೂ ಬುದ್ಧಿಮಾಂದ್ಯ ಮಕ್ಕಳಿಗಾಗಿ ನಡೆಸಲಾಗುತ್ತಿದೆ.ರಾಜ್ಯ ಸರ್ಕಾರದಿಂದ ಅನುದಾನವನ್ನು ಜಿಲ್ಲಾ ಪಂಚಾಯತ್ ಮೂಲಕ ಬಿಡುಗಡೆ ಮಾಡಲಾಗುತ್ತಿದೆ.

**4. ವಿಕಲಚೇತನರಿಗೆ ವೃತ್ತಿ ತರಬೇತಿ ಕೇಂದ್ರಗಳು:**

ಈ ಯೋಜನೆಯಡಿ ವಿವಿಧ ರೀತಿಯ ವಿಕಲಚೇತನರಿಗೆ ವೃತ್ತಿ ತರಬೇತಿಯನ್ನು ನೀಡುವುದಾಗಿದೆ. 1982ರ ರಾಜ್ಯ ಅನುದಾನ ಸಂಹಿತೆಯಡಿ 05 ತರಬೇತಿ ಕೇಂದ್ರಗಳನ್ನು ರಾಜ್ಯ ಸಹಾಯಾನುದಾನವಡಿ ಬೆಂಗಳೂರಿನಲ್ಲಿ 03 ಮತ್ತು ಮೈಸೂರಿನಲ್ಲಿ 01 ಹಾಗೂ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ 01 ವಾಕ್ ಶ್ರವಣ ಕೇಂದ್ರವನ್ನು ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಸಲಾಗುತ್ತಿದೆ. ವೃತ್ತಿ ತರಬೇತಿ ಕೇಂದ್ರಗಳಲ್ಲಿ ವಿವಿಧ ರೀತಿಯ ವಿಕಲಚೇತನರಿಗೆ ಫಿಟ್ಟರ್, ಟರ್ನರ್, ಸರಳ ಇಂಜಿನಿಯರಿಂಗ್, ಚಿತ್ರ, ಹಗ್ಗ, ಚಾಪೆ ಹೆಣೆಯುವುದು ಹಾಗೂ ಪ್ಲಾಸ್ಟಿಕ್ ಮೌಲ್ಡಿಂಗ್ ತರಬೇತಿಯನ್ನು ನೀಡಲಾಗುತ್ತಿದೆ.ಪ್ರತಿ ತರಬೇತಿ ಕೇಂದ್ರದಲ್ಲಿ ವಾರ್ಷಿಕ 25 ಫಲಾನುಭವಿಗಳು ತರಬೇತಿ ಪಡೆಯಲು ಅವಕಾಶವಿರುತ್ತದೆ.

**5.ಅಂಗವಿಕಲ ಮಕ್ಕಳ ಕೇಂದ್ರೀಕೃತ ವಿಶೇಷ ಶೈಕ್ಷಣಿಕ ಯೋಜನೆ ನಡೆಯುತ್ತಿರುವ ವಿಶೇಷ ಶಾಲೆಗಳು:**

ಈ ಯೋಜನೆಯಡಿ ಬುದ್ಧಿಮಾಂದ್ಯ (ಸೆರಬ್ರಲ್ ಪಾಲ್ಸಿ, ಆಟಿಸಂ), ದೃಷ್ಟಿದೋಷ, ಶ್ರವಣದೋಷವುಳ್ಳ ಮಕ್ಕಳಿಗಾಗಿ ವಸತಿಯುತ ಹಾಗೂ ವಸತಿರಹಿತ ಶಾಲೆಗಳು ಸೇರಿದಂತೆ ಒಟ್ಟು 139 ವಿಶೇಷ ಶಾಲೆಗಳು ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಯುತ್ತಿದ್ದು, ಅನುದಾನ ಬಿಡುಗಡೆ ಮಾಡಲಾಗುತ್ತಿದೆ.

6 **ಮಾನಸಿಕ ಅಸ್ವಸ್ಥ, ಸೆರಬ್ರಲ್ ಪಾಲ್ಸಿ, ಆಟಿಸಂ ಮಕ್ಕಳ ಹಗಲು ಯೋಗಕ್ಷೇಮ ಕೇಂದ್ರಗಳು:**

ಸೆರಬ್ರಲ್ ಪಾಲ್ಸಿ, ಆಟಿಸಂ, ಮಾನಸಿಕ ಅಸ್ವಸ್ಥ ಹಾಗೂ ತೀವ್ರತರದ ಅಂಗವೈಕಲ್ಯತೆ ಹೊಂದಿರುವ ಮೂರರಿಂದ 25 ವರ್ಷದ ಒಳಗಿನ ಮಕ್ಕಳಿಗಾಗಿ 02 ಹಗಲು ಯೋಗಕ್ಷೇಮ ಕೇಂದ್ರಗಳನ್ನು ಬೆಂಗಳೂರು ನಗರ ಜಿಲ್ಲೆಯಲ್ಲಿ ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಸುತ್ತಿದ್ದು, ಪ್ರತಿ ಕೇಂದ್ರದಲ್ಲಿ 25 ಮಕ್ಕಳನ್ನು ದಾಖಲಿಸಲು ಅವಕಾಶವಿರುತ್ತದೆ.

7. **ಅಂಗವಿಕಲ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ಮತ್ತು ಪ್ರೋತ್ಸಾಹಧನ:**

ಈ ಯೋಜನೆಯಡಿ ಒಂದನೇ ತರಗತಿಯಿಂದ ಸ್ನಾತಕೋತ್ತರ ಪದವಿಯವರೆಗೆ ವ್ಯಾಸಂಗ ಮಾಡುತ್ತಿರುವ ಅರ್ಹ ವಿಕಲಚೇತನ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನವನ್ನು ಆಯಾ ಜಿಲ್ಲಾ ಕಛೇರಿಗಳ ಮೂಲಕ ಮಂಜೂರು ಮಾಡಲಾಗುತ್ತಿದೆ. ಈ ಯೋಜನೆಯ ಫಲಾನುಭವಿಗಳಿಗೆ ಆದಾಯ ಮಿತಿಯಿಂದ ವಿನಾಯಿತಿಗೊಳಿಸಲಾಗಿದೆ.

| ಕ್ರ ಸಂ. | ತರಗತಿವಾರು | ವಿದ್ಯಾರ್ಥಿ ವೇತನ ಮಾಹೆಯಾನ |
|---|---|---|
| 1 | 1–6 | 200/– |
| 2 | 6–10 | 400/– |
| 3 | ಪಿಯುಸಿ | 600/– |
| 4 | ಬಿ.ಎ./ಬಿಎಸ್ಸಿ/ಬಿ.ಕಾಂ./ ಇತರೆ ಪದವೀಧರರು ಹಾಗೂ ಟಿ.ಸಿ.ಹೆಚ್/ತತ್ಸಮಾನ | 800/– |
| 5 | ಬಿ.ಇ/ಬಿಟೆಕ್/ ಎಂ.ಬಿ.ಬಿಎಸ್/ ಎಸ್.ಎಲ್.ಬಿ/ಡಿಪ್ಲೊಮೊ ಇನ್ ಪ್ರಫೆಷನ್ ಮತ್ತು ಇಂಜಿನಿಯರಿಂಗ್ ಇನ್ ಪ್ಲ್ಯಾಂಟ್ ಟ್ರೈನಿಂಗ್. | 500/– |
| 6 | ಎಂ.ಎ/ಎಂಎಸ್ಸಿ/ಎಂ.ಕಾಂ/ ಎಲ್.ಎಲ್.ಎಂ. ಹಾಗೂ ತತ್ಸಮಾನ | 600/– |

8. **ಪ್ರತಿಭಾವಂತ ಅಂಗವಿಕಲ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನ ಯೋಜನೆ:**

ಸಾರ್ವತ್ರಿಕ ಪರೀಕ್ಷೆಗಳಲ್ಲಿ ಶೇಕಡ 60 ಕ್ಕಿಂತಲೂ ಹೆಚ್ಚಿನ ಅಂಕಗಳನ್ನು ಪಡೆದ ಪ್ರತಿಭಾನ್ವಿತ ವಿಕಲಚೇತನ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನ ನೀಡುವ ಯೋಜನೆ ಇದಾಗಿದೆ.

| ಕ್ರ ಸಂ. | ತರಗತಿಗಳು | ಪ್ರೋತ್ಸಾಹಧನ |
|---|---|---|
| 1 | ಎಸ್.ಎಸ್.ಎಲ್.ಸಿ | ರೂ.3000/– |
| 2 | ಪದವಿ ಪೂರ್ವ ಶಿಕ್ಷಣ | ರೂ.5000/– |
| 3 | ಪದವಿ, ಟಿ.ಸಿ.ಹೆಚ್. | ರೂ.8000/– |
| 4 | ಬಿ.ಇಡಿ. ಸ್ನಾತಕೋತ್ತರ ಪದವಿ, ಎಂ.ಎ. ಎಂ.ಕಾಂ. ಎಂ.ಎಸ್ಸಿ. ಹಾಗೂ ಪದವಿ ನಂತರ 2 ವರ್ಷಗಳ ಕೋರ್ಸಗೆ | ರೂ.10000/– |
| 5 | ಕೃಷಿ ಪದವಿ. ಇಂಜಿನಿಯರಿಂಗ್ ತಾಂತ್ರಿಕ ಪಶುವೈದ್ಯಕೀಯ, ಎಂ.ಇಡಿ | ರೂ.12000/– |

9. **ಉನ್ನತ ಶಿಕ್ಷಣ ಪಡೆಯುವ ವಿಕಲಚೇತನರಿಗೆ ಶುಲ್ಕ ಮರುಪಾವತಿ:**

ಉನ್ನತ ಶಿಕ್ಷಣ ಪಡೆಯುವ ವಿಕಲಚೇತನರಿಗೆ ಎಸ್.ಎಸ್.ಎಲ್.ಸಿ ನಂತರ ಉನ್ನತ ಶಿಕ್ಷಣ, ವೃತ್ತಿ ಶಿಕ್ಷಣ, ತಾಂತ್ರಿಕ ಶಿಕ್ಷಣ, ಸ್ನಾತಕೋತ್ತರ, ಔದ್ಯೋಗಿಕ ಶಿಕ್ಷಣಗಳಿಗೆ ನಿಯಮಾನುಸಾರ ಆಯ್ಕೆಯಾಗುವ ವಿದ್ಯಾರ್ಥಿಗಳಿಗೆ ಸರ್ಕಾರವು ನಿಗದಿಪಡಿಸಿರುವ ಪರೀಕ್ಷಾ ಶುಲ್ಕ ಬೋಧನಾ ಶುಲ್ಕ, ಪ್ರಯೋಗಾಲಯ ಶುಲ್ಕ, ಕ್ರೀಡಾ ಶುಲ್ಕ ಹಾಗೂ ಗ್ರಂಥಾಲಯ ಶುಲ್ಕಗಳನ್ನು ಮರುಪಾವತಿಸುವ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಈ ಯೋಜನೆಯಡಿ ಸೌಲಭ್ಯ ಪಡೆಯುವ ವಿದ್ಯಾರ್ಥಿಗಳಿಗೆ ಯಾವುದೇ ಆದಾಯಮಿತಿ ಇರುವುದಿಲ್ಲ.

10. ಬ್ರೈಲ್ ಮುದ್ರಣಾಲಯ:

ರಾಜ್ಯಾದ್ಯಂತ ವಿಶೇಷ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ದೃಷ್ಟಿದೋಷವುಳ್ಳ ಮಕ್ಕಳಿಗೆ ಬ್ರೈಲ್ ಪುಸ್ತಕಗಳನ್ನು ಉಚಿತವಾಗಿ ನೀಡಲು ಮೈಸೂರಿನಲ್ಲಿರುವ ಬ್ರೈಲ್ ಮುದ್ರಣಾಲಯದಲ್ಲಿ ಮುದ್ರಿಸಿ ಸರಬರಾಜು ಮಾಡಲಾಗುತ್ತಿದೆ.

11. ವಿಶೇಷ ಶಿಕ್ಷಕರ ತರಬೇತಿ ಕೇಂದ್ರ ಯೋಜನೆ:

ದೃಷ್ಟಿದೋಷವುಳ್ಳ ಹಾಗೂ ಶ್ರವಣದೋಷವುಳ್ಳ ವಿದ್ಯಾರ್ಥಿಗಳಿಗೆ ಬೋಧಿಸುವ ಶಿಕ್ಷಕರಿಗೆ ವಿಶೇಷ ಶಿಕ್ಷಣ ನೀಡಲು ತಲಾ ಒಂದರಂತೆ ವಿಶೇಷ ಶಿಕ್ಷಕರ ತರಬೇತಿ ಕೇಂದ್ರವನ್ನು ಮೈಸೂರಿನಲ್ಲಿ ನಡೆಸುತ್ತಿದ್ದು, ಪ್ರತಿ ವರ್ಷ ಪ್ರತಿ ಕೇಂದ್ರದಲ್ಲಿ 25 ಪ್ರಶಿಕ್ಷಣಾರ್ಥಿಗಳು ತರಬೇತಿ ಪಡೆಯಲು ಅವಕಾಶವಿರುತ್ತದೆ.

12. ನಾಲ್ಕು ವರ್ಷದೊಳಗಿನ ಶ್ರವಣ ದೋಷವುಳ್ಳ ಮಕ್ಕಳು ಹಾಗೂ ಅವರ ತಾಯಂದಿರ ಸಹಿತ ವಾಕ್ ಮತ್ತು ತರಬೇತಿ ಕೇಂದ್ರ ವಸತಿರಹಿತ ತರಬೇತಿ ಕೇಂದ್ರ:

2021-22ನೇ ಸಾಲಿನಲ್ಲಿ ಹುಟ್ಟಿನಿಂದ ಕಿವುಡರಾದ ಮಕ್ಕಳನ್ನು ಪ್ರಾರಂಭದಲ್ಲಿ ಗುರುತಿಸಿ ಅವರಿಗೆ ಭಾಷಾ ತರಬೇತಿಯನ್ನು ಆ ಮಕ್ಕಳ ತಾಯಿಯಂದಿರ ಸಹಿತ ನೀಡಿದಲ್ಲಿ ಆ ಮಗುವು ಭಾಷೆ ಕಲಿತು ಸಾಮಾನ್ಯ ಮಗುವಿನಂತೆ ಮಾಡನಾಡಲು ಶಕ್ತವಾಗುವುದು ಎಂಬ ಉದ್ದೇಶದಿಂದ ಯೋಜನೆಯನ್ನು ಜಾರಿಗೆ ತರಲಾಗಿದೆ.ನಾಲ್ಕು ವರ್ಷದೊಳಗಿನ ಶ್ರವಣ ದೋಷವುಳ್ಳ ಮಕ್ಕಳು ಹಾಗೂ ಅವರ ತಾಯಂದಿರ ಸಹಿತ ವಾಕ್ ಮತ್ತು ತರಬೇತಿ ಕೇಂದ್ರ ವಸತಿರಹಿತ ತರಬೇತಿ ನೀಡಲು ವಿಭಾಗವಾರು 2 ಜಿಲ್ಲೆಗಳಲ್ಲಿ ಒಟ್ಟು 8 ಜಿಲ್ಲೆಗಳಿಗೆ ಪ್ರಾರಂಭಿಸಲು ಅವಕಾಶವಿರುತ್ತದೆ. ಅದರಂತೆ ಪ್ರಸ್ತುತ ನಾಲ್ಕು ಜಿಲ್ಲೆಗಳಲ್ಲಿ (ಬೆಂಗಳೂರು ನಗರ, ತುಮಕೂರು, ಮೈಸೂರು ಹಾಗೂ ಕಲಬುರ್ಗಿ) ಈ ಯೋಜನೆಯನ್ನು ಸ್ವಯಂಸೇವಾ ಸಂಸ್ಥೆಗಳ ಮೂಲಕ ಅನುಷ್ಠಾನಗೊಳಿಸಲಾಗಿರುತ್ತದೆ.

13. ಸರ್ಕಾರಿ ಹುದ್ದೆಗಳಲ್ಲಿ ಮೀಸಲಾತಿ.

ವಿಕಲಚೇತನ ವ್ಯಕ್ತಿಗಳಿಗೆ ರಾಜ್ಯ ಸರ್ಕಾರದ ಎ ಮತ್ತು ಬಿ ವೃಂದದ ಹುದ್ದೆಗಳಲ್ಲಿ ಶೇ.4ರಷ್ಟು ಮತ್ತು ಸಿ ಮತ್ತು ಡಿ ವೃಂದದ ಹುದ್ದೆಗಳಲ್ಲಿ ಶೇ5ರಷ್ಟು ಹುದ್ದೆಗಳನ್ನು ಮೀಸಲಿರಿಸಿದೆ.

14. ಆಧಾರ ಯೋಜನೆ :

ವಿಕಲಚೇತನರು **ಸ್ವಯಂ** ಉದ್ಯೋಗ ಕೈಗೊಂಡು ಜೀವನ ಸಾಗಿಸಲು ಅನುಕೂಲವಾಗುವಂತೆ ಆಧಾರ ಸಾಲ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಈ ಯೋಜನೆಯಡಿ ಶೇ.50ರಷ್ಟು ಬ್ಯಾಂಕ್ ಸಾಲ ಮತ್ತು ಶೇ.50ರಷ್ಟು ಸಹಾಯಧನವನ್ನು ಇಲಾಖೆಯಿಂದ ನೀಡಲಾಗುತ್ತದೆ.

15. <u>ಸಮಾಜ ಸೇವಾ ಸಂಕೀರ್ಣ:</u>

ನಿರ್ಗತಿಕ ಬುದ್ಧಿಮಾಂದ್ಯ ಪುರುಷರಿಗಾಗಿ ಸಮಾಜ ಸೇವಾ ಸಂಕೀರ್ಣ ಸಂಸ್ಥೆಯು ಬೆಂಗಳೂರಿನಲ್ಲಿ ಸರ್ಕಾರದ ವತಿಯಿಂದ ನಡೆಯುತ್ತಿದ್ದು, ಈ ಸಂಸ್ಥೆಯಲ್ಲಿ ಉಚಿತ ಊಟ, ವಸತಿ, ವೈದ್ಯಕೀಯ ಸೌಲಭ್ಯ, ಸಂರಕ್ಷಣೆ ಒದಗಿಸಲಾಗುತ್ತಿದೆ.

16. ಮಂದಮತಿ <u>ಮಹಿಳೆಯರ ಅನುಪಾಲನಾ ಗೃಹ:</u>

17 ವರ್ಷ ಮೇಲ್ಪಟ್ಟ ನಿರ್ಗತಿಕ ಮಹಿಳಾ ಬುದ್ಧಿಮಾಂದ್ಯರಿಗೆ ಉಚಿತ ಊಟ, ವಸತಿ, ವೈದ್ಯಕೀಯ ಸೌಲಭ್ಯ ಮತ್ತು ಸಂರಕ್ಷಣೆ ಒದಗಿಸುವ ಉದ್ದೇಶದಿಂದ ಮಂದಮತಿ ಮಹಿಳೆಯರ ಅನುಪಾಲನಾ ಗೃಹಗಳನ್ನು ಬೆಂಗಳೂರು ನಗರ ಹಾಗೂ ಹುಬ್ಬಳ್ಳಿಯಲ್ಲಿ ಇಲಾಖಾವತಿಯಿಂದ ನಡೆಸಲಾಗುತ್ತಿದೆ.

17. <u>ಮಾನಸಿಕ ಅಸ್ವಸ್ಥರಿಗೆ ಮಾನಸ ಕೇಂದ್ರಗಳು:</u>

ಮಾನಸಿಕ ಅಸ್ವಸ್ಥರಿಗಾಗಿ ಮಾನಸ ಕೇಂದ್ರಗಳನ್ನು ಬೆಂಗಳೂರು ನಗರ ಹಾಗೂ ಬೆಳಗಾವಿ ಜಿಲ್ಲೆಗಳಲ್ಲಿ ನಡೆಸುತ್ತಿದ್ದು, ರಾಜ್ಯ ಉಚ್ಚ ನ್ಯಾಯಾಲಯ ಮತ್ತು ಅಧೀನ ನ್ಯಾಯಾಲಯಗಳಿಂದ ಆದೇಶಿಸಲ್ಪಡುವ ಮಾನಸಿಕ ಅಸ್ವಸ್ಥರನ್ನು ಹಾಗೂ ರಸ್ತೆಗಳಲ್ಲಿ ಓಡಾಡುವ ನಿರ್ಗತಿಕ ಮಾನಸಿಕ ಅಸ್ವಸ್ಥರನ್ನು ಈ ಕೇಂದ್ರಗಳಲ್ಲಿ ನಿರ್ದಿಷ್ಟ ವೈದ್ಯಕೀಯ ಪ್ರಾಧಿಕಾರದ ಆದೇಶದ ಮೇರೆಗೆ ದಾಖಲಿಸಲು ಅವಕಾಶವಿರುತ್ತದೆ. ಈ ಕೇಂದ್ರಗಳಲ್ಲಿ ಫಲಾನುಭವಿಗಳಿಗೆ ಉಚಿತ ಊಟ, ವಸತಿ, ವೈದ್ಯಕೀಯ ಶುಶ್ರೂಷೆ, ವೈದ್ಯಕೀಯ ಸಲಹೆ(ಕೌನ್ಸಲಿಂಗ್) ಸೌಲಭ್ಯವನ್ನು ನೀಡಲಾಗುತ್ತಿದ್ದು, ಇವು ಅಲ್ಪಾವಧಿ ಕೇಂದ್ರಗಳಾಗಿರುತ್ತವೆ.

18.<u>ಬುದ್ಧಿಮಾಂದ್ಯ ಮಕ್ಕಳ ಪೋಷಕರಿಗೆ ವಿಮಾ ಯೋಜನೆ:</u>

ಬುದ್ಧಿಮಾಂದ್ಯ ಮಕ್ಕಳ/ವ್ಯಕ್ತಿಗಳ ತಂದೆ: ತಾಯಿ: ಪೋಷಕರ ವಿಮಾ ಯೋಜನೆಯನ್ನು ಭಾರತೀಯ ಜೀವ ವಿಮಾ ನಿಗಮದ ಮೂಲಕ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ಬುದ್ಧಿಮಾಂದ್ಯ ಮಕ್ಕಳ/ವ್ಯಕ್ತಿಗಳ ತಂದೆ:ತಾಯಿ: ಪೋಷಕರು ಮರಣ ಹೊಂದಿದ ನಂತರ ಬುದ್ಧಿಮಾಂದ್ಯ ಮಕ್ಕಳ ಜೀವನ ನಿರ್ವಹಣೆಗಾಗಿ ರೂ.20,000/-ಗಳ ಪರಿಹಾರ ಧನವನ್ನು ಕುಟುಂಬದ ನಾಮ ನಿರ್ದೇಶಿತ ಸದಸ್ಯರಿಗೆ ಪಾವತಿಸಲಾಗುತ್ತಿದೆ.

19.<u>ವಿಕಲಚೇತನ ವ್ಯಕ್ತಿಗಳನ್ನು ಸಾಮಾನ್ಯರು ಮದುವೆಯಾದಲ್ಲಿ ಪ್ರೋತ್ಸಾಹ ಧನ ನೀಡುವ ಯೋಜನೆ:</u>

ವಿಕಲಚೇತನ ಯುವಕ/ಯುವತಿಯರನ್ನು ವಿವಾಹವಾಗುವ ಸಾಮಾನ್ಯ ಯುವಕ/ ಯುವತಿಯರಿಗೆ ನಿರಂತರವಾಗಿ ಮಾಸಿಕ ಆದಾಯ ದೊರಕಿಸಲು ವಿಕಲಚೇತನ ವ್ಯಕ್ತಿಯ ಹೆಸರಿನಲ್ಲಿ ರೂ.50,000/-ಗಳನ್ನು ಮದುವೆಯಾದ ಸಾಮಾನ್ಯ ವ್ಯಕ್ತಿ ಹಾಗೂ ವಿಕಲಚೇತನರ ಜಂಟಿ ಹೆಸರಿನಲ್ಲಿ 05 ವರ್ಷದ ಅವಧಿಗೆ ಹೂಡಿಕೆಯ ರೂಪದಲ್ಲಿ ನೀಡಿ ಪ್ರೋತ್ಸಾಹ ನೀಡಲು ಹಾಗೂ ಅದರಿಂದ ಬರುವ ಬಡ್ಡಿ ಹಣವನ್ನು ಉಪಯೋಗಿಸುವುದು ಹಾಗೂ 05 ವರ್ಷಗಳ ನಂತರ ಠೇವಣಿ ಮೊತ್ತವನ್ನು ವಾಪಸ್ಸು ಪಡೆಯಬಹುದು ಅಥವಾ ಮುಂದುವರೆಸಲು ಅವಕಾಶವಿರುತ್ತದೆ.

20. **ಅಂಧ ಮಹಿಳೆಯರಿಗೆ ಜನಿಸುವ ಮಕ್ಕಳಿಗೆ ಆರೈಕೆ ಭತ್ಯೆ ಒದಗಿಸುವ ಯೋಜನೆ :**

ಅಂಧ ಮಹಿಳೆಯರು ಮಗುವಿಗೆ ಜನ್ಮ ನೀಡಿದಾಗ ಆ ಮಗುವನ್ನು ಇತರೆ ಸಾಮಾನ್ಯ ತಾಯಂದಿರಂತೆ ಆರೈಕೆ ಮಾಡುವುದು ಕಷ್ಟಕರವಾಗಿರುತ್ತದೆ.ಇಂತಹ ಅಂಧ ಮಹಿಳೆಯರಿಗೆ ಜನಿಸುವ ಮಕ್ಕಳಿಗೆ ಆರೈಕೆ ಮಾಡಲು ಆಯಾ ಸೇವೆ, ಆರೋಗ್ಯ ಪಾಲನೆ, ಪೌಷ್ಟಿಕ ಆಹಾರ, ಔಷಧೋಪಚಾರಗಳಿಗೆ ಮಾಹೆಯಾನ ರೂ.2000/- ದಂತೆ **5** ವರ್ಷಗಳ ಅವಧಿಗೆ ಸಹಾಯಧನವನ್ನು ನೀಡಲಾಗುತ್ತಿದೆ.ಈ ಸೌಲಭ್ಯವನ್ನು ಗರಿಷ್ಠ 2 ಮಕ್ಕಳವರೆಗೆ ಪಡೆಯಬಹುದಾಗಿದೆ.

21. **ನಿರುದ್ಯೋಗ ಭತ್ಯೆ:-**

ಎಸ್.ಎಸ್.ಎಲ್.ಸಿ ಹಾಗೂ ನಂತರ ವ್ಯಾಸಂಗ ಮಾಡಿರುವ ನಿರುದ್ಯೋಗಿ ವಿಕಲಚೇತನರಿಗೆ ಮಾಸಿಕ ರೂ.1000/-ಗಳ ನಿರುದ್ಯೋಗ ಭತ್ಯೆಯನ್ನು ಮಂಜೂರು ಮಾಡಲಾಗುತ್ತಿದೆ.

22. **ಅಂಗವಿಕಲ ಪುರುಷ ಹಾಗೂ ಮಹಿಳೆಯರ ಸರ್ಕಾರದ ವಸತಿನಿಲಯ:**

ಬೆಂಗಳೂರಿನಲ್ಲಿ ವಿಕಲಚೇತನ ಮಹಿಳೆ ಮತ್ತು ವಿಕಲಚೇತನ ಪುರುಷರಿಗಾಗಿ ಅಂಗವಿಕಲ ಉದ್ಯೋಗಸ್ಥ ನೌಕರರು ಮತ್ತು ಪ್ರಶಿಕ್ಷಣಾರ್ಥಿಗಳಿಗಾಗಿ ಮಹಿಳೆಯರು ಹಾಗೂ ಪುರುಷರಿಗಾಗಿ ಪ್ರತ್ಯೇಕವಾದ ವಸತಿ ನಿಲಯವನ್ನು ಸರ್ಕಾರದಿಂದ ನಡೆಸಲಾಗುತ್ತಿದೆ. ಪ್ರಸ್ತುತ ಈ ಎರಡೂ ವಸತಿ ನಿಲಯಗಳು ಬೆಂಗಳೂರಿನ ಕೆಂಗೇರಿಯಲ್ಲಿ ನಡೆಸಲಾಗುತ್ತಿದೆ. ಪ್ರತಿ ವಸತಿ ನಿಲಯದಲ್ಲಿ 50 ನಿವಾಸಿಗಳನ್ನು ದಾಖಲಿಸಲು ಅವಕಾಶವಿರುತ್ತದೆ.

23. **ಉದ್ಯೋಗಸ್ಥ ವಿಕಲಚೇತನ ಮಹಿಳೆಯರಿಗೆ ಸ್ವಯಂ ಸೇವಾ ಸಂಸ್ಥೆಗಳ ಮುಖಾಂತರ ವಸತಿ ನಿಲಯಗಳು:**

ಅಂಗವಿಕಲ ಉದ್ಯೋಗಸ್ಥ ಮಹಿಳೆಯರಿಗಾಗಿ ಹಾಗೂ ವಿದ್ಯಾರ್ಥಿನಿ/ತರಬೇತಿದಾರರಿಗೆ ಸ್ವಯಂ ಸೇವಾ ಸಂಸ್ಥೆಗಳ ಮೂಲಕ 25 ಜಿಲ್ಲೆಗಳಲ್ಲಿ ಮಹಿಳಾ ವಸತಿ ನಿಲಯಗಳು (ಬೆಂಗಳೂರು ನಗರ ಜಿಲ್ಲೆಯಲ್ಲಿ 4 ವಸತಿ ನಿಲಯಗಳು) ನಡೆಯುತ್ತಿವೆ. ಸದರಿ ವಸತಿ ನಿಲಯದಲ್ಲಿ ಉದ್ಯೋಗಸ್ಥ ವಿಕಲಚೇತನ ಮಹಿಳೆಯರಿಗೆ ಮತ್ತು ವಿದ್ಯಾರ್ಥಿನಿಯರಿಗೆ ಹಾಗೂ ತರಬೇತಿದಾರರಿಗೆ ವಸತಿ ಸೌಲಭ್ಯವನ್ನು ಕಲ್ಪಿಸಿದ್ದು, ವಿದ್ಯಾರ್ಥಿನಿಯರು ಹಾಗೂ ತರಬೇತಿದಾರರಿಗೆ ಮಾತ್ರ ಉಚಿತ ಊಟದ ವ್ಯವಸ್ಥೆ ಇರುತ್ತದೆ.

24. **ಗ್ರಾಮೀಣ ಪುನರ್ವಸತಿ ಯೋಜನೆ:**

ಈ ಯೋಜನೆಯನ್ನು ರಾಜ್ಯದ ಎಲ್ಲಾ 30 ಜಿಲ್ಲೆಗಳ ಎಲ್ಲಾ ತಾಲ್ಲೂಕುಗಳಲ್ಲಿ ಅನುಷ್ಠಾನ ಗೊಳಿಸಲಾಗುತ್ತಿದೆ. ಪ್ರತಿ ಗ್ರಾಮ ಪಂಚಾಯತಿ ಅಡಿಯಲ್ಲಿ ಎಸ್.ಎಸ್.ಎಲ್.ಸಿ. ಉತ್ತೀರ್ಣ/ ಅನುತ್ತೀರ್ಣರಾದ ಸಮರ್ಥ ವಿಕಲಚೇತನರನ್ನು ಗ್ರಾಮೀಣ ಪುನರ್ವಸತಿ ಕಾರ್ಯಕರ್ತರೆಂದು ಹಾಗೂ ತಾಲ್ಲೂಕು ಪಂಚಾಯಿತಿ ಕಚೇರಿಯಲ್ಲಿ ಸ್ಥಳೀಯ ಪದವೀಧರ ವಿಕಲಚೇತನರೊಬ್ಬರನ್ನು ವಿವಿಧೋದ್ದೇಶ ಪುನರ್ವಸತಿ ಕಾರ್ಯಕರ್ತರೆಂದು, ಸ್ಥಳೀಯ ನಗರ ಪ್ರದೇಶಗಳಲ್ಲಿ ನಗರ ಪುನರ್ವಸತಿ ಕಾರ್ಯಕರ್ತರೆಂದು ಮತ್ತು ನಿರ್ದೇಶನಾಲಯದಲ್ಲಿ ರಾಜ್ಯ ಸಂಯೋಜಕರನ್ನು ಗೌರವಧನ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲಾಗಿದೆ. ಈ ಕಾರ್ಯಕರ್ತರ ಮೂಲಕ ವಿಕಲಚೇತನರಿಗೆ ಎಲ್ಲಾ ಸೇವಾ ಸೌಲಭ್ಯಗಳನ್ನು ಅವರಿರುವ ಸ್ಥಳಗಳಲ್ಲಿಯೇ ವಿಕಲಚೇತನರ ಮೂಲಕವೇ ತಲುಪಿಸಲಾಗುವುದು.

**25. ಮರಣ ಪರಿಹಾರ ನಿಧಿ ಯೋಜನೆ:**

ಪ್ರಸ್ತುತ ಗ್ರಾಮೀಣ ಪುನರ್ವಸತಿ ಯೋಜನೆಯಡಿ ಕಾರ್ಯನಿರ್ವಹಿಸುತ್ತಿರುವ ಕಾರ್ಯಕರ್ತರು ನಿಧನ ಹೊಂದಿದ್ದಲ್ಲಿ ರೂ.1.00 ಲಕ್ಷಗಳ ಪರಿಹಾರ ಧನ ನೀಡಲು ಅವಕಾಶವಿರುತ್ತದೆ.

**26.ಅಂಗವಿಕಲರಿಗೆ ಸಾಧನ ಸಲಕರಣೆಗಳು :**

ಈ ಯೋಜನೆಯಡಿಯಲ್ಲಿ ಅಂಗವಿಕಲರಿಗೆ ಅವಶ್ಯವಾಗಿರುವ ಸಾಧನ ಸಲಕರಣೆಗಳನ್ನು ನೀಡ ಲಾಗುತ್ತಿದೆ. ಫಲಾನುಭವಿಯ ಕುಟುಂಬದ ವಾರ್ಷಿಕ ಆದಾಯ ಮಿತಿಯನ್ನು ಗ್ರಾಮೀಣ ಪ್ರದೇಶದ ಫಲಾನುಭವಿಗಳಿಗೆ ರೂ.11.500/- ಮತ್ತು ನಗರ ಪ್ರದೇಶದ ಫಲಾನುಭವಿಗಳಿಗೆ ರೂ.24.000/- ನಿಗದಿಗೊಳಿಸಲಾಗಿದೆ. ಈ ಯೋಜನೆಯಡಿ ರೂ.15,000/-ಗಳ ಮಿತಿಯೊಳಗೆ ವಿಕಲಚೇತನರಿಗೆ ಅವಶ್ಯವಿರುವ ಗಾಲಿ ಕುರ್ಚಿ, ಸಾದಾ ತ್ರಿಚಕ್ರವಾಹನ, ಕ್ಯಾಲಿಪರ್ಸ್, ಕ್ರಚಸ್, ಶ್ರವಣ ಸಾಧನ, ವೈಟ್ ಕೇನ್, ಬ್ರೈಲ್ ವಾಚ್ ಇನ್ನಿತರ ಸಲಕರಣೆಗಳನ್ನು ಉಚಿತವಾಗಿ ನೀಡಲಾಗುತ್ತಿದೆ.

**27. ಅಂಧ ವಿದ್ಯಾರ್ಥಿಗಳಿಗೆ ಟಾಕಿಂಗ್ ಲ್ಯಾಪ್‌ಟಾಪ್ ಯೋಜನೆ :**

ಎಸ್.ಎಸ್.ಎಲ್.ಸಿ ನಂತರ ವ್ಯಾಸಂಗ ಮಾಡುವ ದೃಷ್ಟಿದೋಷವುಳ್ಳ ವಿಕಲಚೇತನ ವಿದ್ಯಾರ್ಥಿಗಳು ಇತ್ತೀಚಿನ ತಂತ್ರಜ್ಞಾನ ಮತ್ತು ತಂತ್ರಾಂಶದ ಉಪಯೋಗದಿಂದ ಉನ್ನತ ಶಿಕ್ಷಣವನ್ನು ಪಡೆಯಲು ಅನುಕೂಲವಾಗುವಂತೆ ಮಾತನಾಡುವ (ಟಾಕಿಂಗ್) ಲ್ಯಾಪ್‌ಟಾಪ್‌ಗಳನ್ನು ಅರ್ಹ ಫಲಾನುಭವಿಗಳಿಗೆ ನೀಡಲಾಗುತ್ತಿದೆ

**28.ತೀವ್ರತರನಾದ ದೈಹಿಕ ವಿಕಲಚೇತನರಿಗೆ ಯಂತ್ರಚಾಲಿತ ದ್ವಿಚಕ್ರವಾಹನ ಯೋಜನೆ :**

20 ರಿಂದ 60 ವರ್ಷದ ವಯೋಮಾನದ ತೀವ್ರತರನಾದ ದೈಹಿಕ ವಿಕಲಚೇತನರಿಗೆ ಓಡಾಡಲು ಅನುಕೂಲವಾಗುವಂತೆ ಜೀವಿತ ಕಾಲದಲ್ಲಿ ಒಂದು ಬಾರಿಗೆ ಯಂತ್ರಚಾಲಿತ ದ್ವಿಚಕ್ರ ವಾಹನವನ್ನು ಮಂಜೂರು ಮಾಡಲಾಗುತ್ತದೆ. ಈ ಯೋಜನೆಯಡಿ ಫಲಾನುಭವಿಯ ಕುಟುಂಬದ ವಾರ್ಷಿಕ ವರಮಾನ ರೂ.2.00 ಲಕ್ಷಗಳಿಗಿಂತ ಕಡಿಮೆ ಇರಬೇಕಾಗಿರುತ್ತದೆ.

**29.ಜಿಲ್ಲಾ ಅಂಗವಿಕಲರ ಪುನರ್ವಸತಿ ಕೇಂದ್ರ ಯೋಜನೆ:-**

ವಿಕಲಚೇತನರನ್ನು ಗುರುತಿಸಿ ಅವರಿಗೆ ಶೈಕ್ಷಣಿಕ, ಉದ್ಯೋಗ ಮತ್ತು ತರಬೇತಿ, ಸಾಮಾಜಿಕ ಭದ್ರತೆ ಹಾಗೂ ಪುನರ್ವಸತಿ ಸೇವೆಗಳನ್ನು ಅವರ ಮನೆ ಬಾಗಿಲಿನಲ್ಲಿಯೇ ಒದಗಿಸಿ ಅವರ ಸರ್ವಾಂಗೀಣ ಪುನರ್ವಸತಿಯನ್ನು ಕಲ್ಪಿಸುವುದು ಈ ಯೋಜನೆಯ ಪ್ರಮುಖ ಉದ್ದೇಶವಾಗಿದೆ. ಈ ಯೋಜನೆಯಡಿ ವಿಕಲಚೇತನರಿಗೆ ಅಗತ್ಯವಿರುವ ವೈದ್ಯಕೀಯ ಸೇವೆ, ವೃತ್ತಿ ಚಿಕಿತ್ಸೆ, ವಿವಿಧ ರೀತಿಯ ಸಾಧನ ಸಲಕರಣೆಗಳನ್ನು ಕೇಂದ್ರಗಳಲ್ಲಿ ತಯಾರಿಸಿ ಒದಗಿಸಲಾಗುವುದು.

**30. ಅಂಗವಿಕಲತೆಯನ್ನು ನಿವಾರಿಸುವ ಶಸ್ತ್ರಚಿಕಿತ್ಸೆಗಾಗಿ ವೈದ್ಯಕೀಯ ಪರಿಹಾರ ನಿಧಿ ಯೋಜನೆ:-**

ಅಂಗವಿಕಲ ವ್ಯಕ್ತಿಗಳಿಗೆ ಅಂಗವಿಕಲತೆಯನ್ನು ನಿವಾರಿಸಲು ಶಸ್ತ್ರ ಚಿಕಿತ್ಸೆಗಾಗಿ ಸರ್ಕಾರಿ ಆಸ್ಪತ್ರೆ, ಸಂಜಯಗಾಂಧಿ ಆಸ್ಪತ್ರೆಗಳಲ್ಲಿ ಹಾಗೂ ಸುಸಜ್ಜಿತ ಖಾಸಗಿ ಆಸ್ಪತ್ರೆಗಳಲ್ಲಿ ಅಂಗವಿಕಲತೆ ನಿವಾರಣಾ ಶಸ್ತ್ರ ಚಿಕಿತ್ಸೆಗಾಗಿ ರೂ.1.00 ಲಕ್ಷಗಳವರೆಗೆ ಸಹಾಯ ಧನವನ್ನು ಮಂಜೂರು ಮಾಡಲಾಗುತ್ತಿದೆ.

31. **ಅಂಧ ವಿದ್ಯಾರ್ಥಿಗಳಿಗೆ ಬ್ರೈಲ್ ಕಿಟ್‌ಗಳ ವಿತರಿಸುವ ಯೋಜನೆ:-**

ಅಂಧ ವಿದ್ಯಾರ್ಥಿಗಳು ತಮ್ಮ ದೈನಂದಿನ ಚಟುವಟಿಕೆಗಳಲ್ಲಿ ಸ್ವಾವಲಂಬಿಗಳಾಗಲು ಅಂಧ ವಿದ್ಯಾರ್ಥಿಗಳಿಗೆ ಟಾಂಕಿಗ್ ಮೊಬೈಲ್, ಬ್ರೈಲ್ ವಾಚ್, ವಾಕಿಂಗ್ ಸ್ಟಿಕ್ ಮತ್ತು ಇನ್ನಿತರ ಸಾಧನೆಗಳನ್ನು ಒಳಗೊಂಡ ತಲಾ ರೂ.25000/-ಗಳ ಕಿಟ್‌ಗಳನ್ನು ವಿತರಿಸಲಾಗುತ್ತಿದೆ.

32. **ಶ್ರವಣದೋಷವುಳ್ಳ ವ್ಯಕ್ತಿಗಳಿಗೆ ಸ್ವಯಂ ಉದ್ಯೋಗಕ್ಕಾಗಿ ಹೊಲಿಗೆ ಯಂತ್ರವನ್ನು ವಿತರಿಸುವ ಯೋಜನೆ:-**

ಶ್ರವಣದೋಷವುಳ್ಳವರು ಉದ್ಯೋಗಾವಕಾಶದಿಂದ ವಂಚಿತರಾಗುತ್ತಿರುವುದನ್ನು ಮನಗಂಡು ಅವರು ಸ್ವಯಂ ಉದ್ಯೋಗ ಕೈಗೊಂಡು ಸ್ವಾವಲಂಬಿಗಳಾಗಲು ಅನುವಾಗುವಂತೆ ಶ್ರವಣದೋಷವುಳ್ಳ ವ್ಯಕ್ತಿಗಳಿಗೆ ಸ್ವಯಂ ಉದ್ಯೋಗಕ್ಕಾಗಿ ಹೊಲಿಗೆ ಯಂತ್ರವನ್ನು ವಿತರಿಸಲಾಗುತ್ತಿದೆ.

33. **ಬ್ಯಾಟರಿ ಚಾಲಿತ ವ್ಹೀಲ್ ಚೇರ್:**

ಚಲನದೋಷವುಳ್ಳ ವ್ಯಕ್ತಿಗಳು ಸುಗಮವಾಗಿ ಓಡಾಡಲು ಅನುಕೂಲವಾಗುವಂತೆ 2023-24ನೇ ಸಾಲಿನಿಂದ ಬ್ಯಾಟರಿ ಚಾಲಿತ ವ್ಹೀಲ್ ಚೇರ್‌ಗಳನ್ನು ನೀಡಲಾಗುತ್ತಿದೆ.

34. **ಸಾಧನೆ ಮತ್ತು ಪ್ರತಿಭೆ ಯೋಜನೆ:**

ವಿಕಲಚೇತನ ಕ್ರೀಡಾಪಟುಗಳಿಗೆ ಪ್ರೋತ್ಸಾಹ ನೀಡಿ ಧನಸಹಾಯ ನೀಡಲು "ಸಾಧನೆ" ಎಂಬ ಯೋಜನೆಯು ಜಾರಿಯಲ್ಲಿದ್ದು, ಕ್ರೀಡೆಗಳಲ್ಲಿ ವಿಶೇಷ ಸಾಧನೆಗೈದ ವಿಕಲಚೇತನರಿಗೆ ರೂ.50,000/-ಗಳ ಧನ ಸಹಾಯವನ್ನು ನೀಡಲಾಗುತ್ತಿದೆ.

ವಿಕಲಚೇತನರು ನೀಡುವ ಸಾಂಸ್ಕೃತಿಕ ಚಟುವಟಿಕೆಗಳಿಗೆ ಪ್ರೋತ್ಸಾಹ ನೀಡಿ ಧನಸಹಾಯ ನೀಡುವ ಸಲುವಾಗಿ "ಪ್ರತಿಭೆ" ಎಂಬ ಯೋಜನೆಯು ಜಾರಿಯಲ್ಲಿದ್ದು, ವೈಯಕ್ತಿಕ ಸಾಂಸ್ಕೃತಿಕ ರೂ.2,000/-ಗಳು ಹಾಗೂ ಸಮೂಹ ಕಾರ್ಯಕ್ರಮಕ್ಕೆ ರೂ.10,000/-ಗಳ ಪ್ರೋತ್ಸಾಹಧನ ನೀಡಲಾಗುತ್ತದೆ.

35. **ನಿರಾಮಯ ಆರೋಗ್ಯ ವಿಮಾ ಯೋಜನೆ :**

ಕೇಂದ್ರ ಸರ್ಕಾರದ ನ್ಯಾಷನಲ್ ಟ್ರಸ್ಟ್ ಆಕ್ಟ್-1999ರಡಿ 04 ಬಗೆಯ ವಿಕಲಚೇತನರಿಗೆ (ಆಟಿಸಂ, ಸೆರಬ್ರಲ್ ಪಾಲ್ಸಿ, ಬುದ್ಧಿಮಾಂದ್ಯ ಮತ್ತು ಬಹುವಿಧ ಅಂಗವಿಕಲರು) ನಿರಾಮಯ ಆರೋಗ್ಯ ವಿಮಾ ಯೋಜನೆಯನ್ನು ಜಾರಿಗೆ ತಂದಿದ್ದು, ಕರ್ನಾಟಕ ರಾಜ್ಯದಲ್ಲಿ ಬಡತನ ರೇಖೆಗಿಂತ ಕೆಳಗಿರುವ ಕುಟುಂಬದ 04 ಬಗೆಯ ವಿಕಲಚೇತನ ವ್ಯಕ್ತಿಗಳಿಗೆ ಒಂದು ಬಾರಿ ವಾರ್ಷಿಕ ರೂ.250/-ಗಳನ್ನು ಸರ್ಕಾರದ ವತಿಯಿಂದ ವಿಮಾ ಕಂತಾಗಿ ಪಾವತಿಸಿ, ಪ್ರತಿ ವರ್ಷ ರೂ.1.00 ಲಕ್ಷಗಳವರೆಗೆ ಉಚಿತವಾಗಿ ವೈದ್ಯಕೀಯ ಸೌಲಭ್ಯ ಪಡೆಯಬಹುದಾಗಿರುತ್ತದೆ. ಈ ಮೊತ್ತದಲ್ಲಿ ರೂ.60,000/-ಗಳವರೆಗೆ ಸರ್ಜರಿ ವೆಚ್ಚ ಹಾಗೂ ಉಳಿದ ರೂ.40,000/-ಗಳಲ್ಲಿ ವೈದ್ಯಕೀಯ ಖರ್ಚು, ಥೆರಪಿ, ಪ್ರಯಾಣ ವೆಚ್ಚಗಳನ್ನು ಒಳಗೊಂಡಿರುತ್ತದೆ. ಬಡತನ ರೇಖೆಗಿಂತ ಮೇಲ್ಪಟ್ಟ ಕುಟುಂಬದ ವಿಕಲಚೇತನ ವ್ಯಕ್ತಿಗಳು ವಾರ್ಷಿಕ ರೂ.500/-ಗಳನ್ನು ಪಾವತಿಸಿ ಈ ಸೌಲಭ್ಯ ಪಡೆಯಬಹುದಾಗಿರುತ್ತದೆ

36. **ವಿಕಲಚೇತನರಿಗೆ ವಿಶಿಷ್ಟ ಗುರುತಿನ ಚೀಟಿ (UNIQUE DISABILITY ID):** ಈ ಯೋಜನೆಯು ಕೇಂದ್ರ ಸರ್ಕಾರ ಪ್ರಾಯೋಜಿತ ಯೋಜನೆಯಾಗಿದೆ. ಈ ಯೋಜನೆಯನ್ನು ರಾಜ್ಯ ಸರ್ಕಾರವು 2019ರಲ್ಲಿ ಅನುಷ್ಠಾನಗೊಳಿಸಿರುತ್ತದೆ. ಈ ಯೋಜನೆಯಡಿಯಲ್ಲಿ ನೀಡಲಾಗುವ ಗುರುತಿನ ಚೀಟಿಯನ್ನು ವಿವಿಧ ಸರ್ಕಾರಿ ಸೌಲಭ್ಯಗಳನ್ನು ಪಡೆಯಲು ಉಪಯೋಗಿಸಿಕೊಳ್ಳಬಹುದಾಗಿದೆ. ರಾಜ್ಯ ಸರ್ಕಾರದಿಂದ ನೇಮಿಸಲಾಗುವ ವೈದ್ಯಕೀಯ ಪ್ರಾಧಿಕಾರಗಳಿಂದ ದೃಢೀಕರಿಸಲಾಗುವ ವೈದ್ಯಕೀಯ ಪ್ರಮಾಣ ಪತ್ರದ ಸಮಗ್ರ ಮಾಹಿತಿಯುಳ್ಳ ಗಣಕೀಕೃತ ಗುರುತಿನ ಚೀಟಿಯನ್ನು ವಿಕಲಚೇತನ ವ್ಯಕ್ತಿಗಳಿಗೆ ನೀಡುವ ವ್ಯವಸ್ಥೆಯಾಗಿದ್ದು, ಇದರಲ್ಲಿ ವಿಕಲಚೇತನ ವ್ಯಕ್ತಿಯ ವಿವರಗಳು ಹಾಗೂ ಅವರಲ್ಲಿರುವ ವಿಕಲತೆಯ ವಿವರ ಮತ್ತು ಪ್ರಮಾಣವನ್ನು ನಮೂದಿಸಲಾಗಿರುತ್ತದೆ.

# ಅನುಬಂಧ-4

**ಕಳೆದ 03 ವರ್ಷಗಳಲ್ಲಿ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯಡಿ ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಯಲ್ಲಿ ಸೌಲಭ್ಯ ಪಡೆದ ಫಲಾನುಭವಿಗಳ ವಿವರ**

| ಕ್ರಸಂ | ಯೋಜನೆಗಳ ವಿವರ | 2020-21 | 2021-22 | 2022-23 |
|---|---|---|---|---|
| 1 | ವಿದ್ಯಾರ್ಥಿ ವೇತನ | 125 | 19 | 417 |
| 2 | ಸಾಧನ ಸಲಕರಣೆ | 64 | 124 | 118 |
| 3 | ಯಂತ್ರಚಾಲಿತ ತ್ರಿಚಕ್ರ ವಾಹನ | 50 | 60 | 41 |
| 4 | ಬ್ರೈಲ್ ಕಿಟ್ | 17 | 6 | 7 |
| 5 | ಹೊಲಿಗೆ ಯಂತ್ರ | 13 | 18 | 18 |
| 6 | ಟಾಕಿಂಗ್ ಲ್ಯಾಪ್ ಟಾಪ್ | 11 | 5 | 5 |
| 7 | ಆಧಾರ ಯೋಜನೆ | 3 | 8 | 16 |
| 8 | ಶುಲ್ಕ ಮರುಪಾವತಿ | 28 | 28 | 7 |
| 9 | ವಿವಾಹ ಪ್ರೋತ್ಸಾಹಧನ ಯೋಜನೆ | 19 | 22 | 19 |
| 10 | ನಿರಾಮಯ | 0 | 0 | 207 |
| 11 | ಸಾಧನ ಯೋಜನೆ | 0 | 0 | 14 |
| 12 | ಮರಣ ಪರಿಹಾರ ನಿಧಿ ಯೋಜನೆ | 0 | 5 | 0 |
| 13 | ಶಿಶುಪಾಲನಾ ಭತ್ಯೆ | 2 | 1 | 1 |
| ಒಟ್ಟು | | 332 | 296 | 870 |